**ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ**
ಶ್ರೀ ಚಾಮರಾಜೇಂದ್ರ ಸಂಸ್ಕೃತ ಮಹಾವಿದ್ಯಾಲಯ ಆವರಣ
ಪಂಪಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – 560018.

**कर्नाटक–संस्कृत–विश्वविद्यालय:**
श्री चामराजेन्द्र संस्कृत महाविद्यालयस्य परिसर:
पम्पमहाकविमार्ग:, चामराजपेटे, बेङ्गलूरु – ५६००१८.

## ೧೪.೦೬.೨೦೧೩ರಂದು ನಡೆದ ಪ್ರಶಾಸನ ಸಮಿತಿ ೧೫ನೇ ಸಭೆಯ ನಡಾವಳಿ

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ **ಪ್ರಶಾಸನ ಸಮಿತಿ ೧೫ನೇ ಸಭೆ**ಯು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ಜೂನ್ ೧೪, ೨೦೧೩ರ ಶುಕ್ರವಾರ ಬೆಳಿಗ್ಗೆ ೧೧.೦೦ ಗಂಟೆಗೆ ವಿಶ್ವವಿದ್ಯಾಲಯದ ಕಾರ್ಯಾಲಯದಲ್ಲಿ ನಡೆಯಿತು. ಈ ಸಭೆಯಲ್ಲಿ ಕೆಳಕಂಡ ಮಾನ್ಯ ಸದಸ್ಯರು ಹಾಜರಿದ್ದರು.

**ಹಾಜರಿದ್ದವರು:**

| | | |
|---|---|---|
| ೧. | **ಪ್ರೊ. ಮಲ್ಲೇಪುರಂ ಜಿ. ವೆಂಕಟೇಶ,** ಮಾನ್ಯ ಕುಲಪತಿಗಳು | ಅಧ್ಯಕ್ಷರು |
| ೨. | **ಪಂ. ಜಯತೀರ್ಥಾಚಾರ್ಯ ಮಳಗಿ,** ಧಾರವಾಡ | ಸದಸ್ಯರು |
| ೩. | **ಡಾ. ಸಿದ್ಧಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು,** ಕವಲೇದುರ್ಗ | ಸದಸ್ಯರು |
| ೪. | **ಡಾ. ಎಚ್.ಆರ್. ವಿಶ್ವಾಸ್,** ಮಂಗಳೂರು | ಸದಸ್ಯರು |
| ೫. | **ಡಾ. ಪಿ.ಬಿ. ಸಂತಪ್ಪನವರ,** ಗುಲಬರ್ಗಾ | ಸದಸ್ಯರು |
| ೬. | **ಶ್ರೀ ಜಿ. ಹನುಮಂತರಾಯಪ್ಪ,** ತುಮಕೂರು | ಸದಸ್ಯರು |
| ೭. | **ಡಾ. ಎಸ್.ಆರ್. ಲೀಲಾ,** ಬೆಂಗಳೂರು | ಸದಸ್ಯರು |
| ೮. | **ಶ್ರೀ ಡಿ. ಸುರೇಂದ್ರಕುಮಾರ್,** ಬೆಂಗಳೂರು | ಸದಸ್ಯರು |
| ೯. | **ಪ್ರೊ. ವೈ.ಎಸ್. ಸಿದ್ದೇಗೌಡ,** ಕುಲಸಚಿವರು | ಸದಸ್ಯ ಕಾರ್ಯದರ್ಶಿ |

**ಗೈರುಹಾಜರಿ:**

| | | |
|---|---|---|
| ೧. | **ಪ್ರಧಾನ ಕಾರ್ಯದರ್ಶಿಗಳು,** ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು | ಸದಸ್ಯರು |
| ೨. | **ಅಪರ ಮುಖ್ಯ ಕಾರ್ಯದರ್ಶಿಗಳು,** ಹಣಕಾಸು ಇಲಾಖೆ, ಬೆಂಗಳೂರು | ಸದಸ್ಯರು |
| ೩. | **ಕಾರ್ಯದರ್ಶಿಗಳು,** ಕಂದಾಯ ಇಲಾಖೆ (ಧಾರ್ಮಿಕ ದತ್ತಿ ವಿಭಾಗ), ಬೆಂಗಳೂರು | ಸದಸ್ಯರು |
| ೪. | **ನಿರ್ದೇಶಕರು,** ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ನಿರ್ದೇಶನಾಲಯ, ಮೈಸೂರು | ಸದಸ್ಯರು |
| ೫. | **ಆಯುಕ್ತರು,** ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು | ಸದಸ್ಯರು |
| ೬. | **ಪ್ರಾದೇಶಿಕ ನಿರ್ದೇಶಕರು,** ಯುಜಿಸಿ–ನೈರುತ್ಯ ಪ್ರಾದೇಶಿಕ ಕೇಂದ್ರ, ಬೆಂಗಳೂರು | ಸದಸ್ಯರು |
| ೭. | **ಪ್ರೊ. ಎನ್. ಅಶ್ವತ್ಥಮ್ಮ,** ಮೈಸೂರು | ಸದಸ್ಯರು |
| ೮. | **ಡಾ. ಟಿ.ಎಸ್. ಸತ್ಯವತಿ,** ಬೆಂಗಳೂರು | ಸದಸ್ಯರು |
| ೯. | **ಡಾ. ಶ್ರೀನಿವಾಸ ವರಖೇಡಿ,** ಡೀನ್, ಭಾಷಾ ನಿಕಾಯ | ಸದಸ್ಯರು |

ಸಭೆಯ ಪ್ರಾರಂಭಕ್ಕೆ ಮಾನ್ಯ ಕುಲಪತಿಗಳು ಎಲ್ಲ ಗೌರವಾನ್ವಿತ ಸದಸ್ಯರನ್ನು ಸ್ವಾಗತಿಸಿದರು. ಸಭೆಯಲ್ಲಿ ಕೆಳಕಂಡ ಕಾರ್ಯಸೂಚಿಗಳು ಮಂಡಿತವಾಗಿ ನಿರ್ಣಯಗೊಂಡವು.

**ವಿಷಯ 1: ಪ್ರಶಾಸನ ಸಮಿತಿ ಹದಿನಾಲ್ಕನೇ ಸಭೆಯ ಅನುಪಾಲನಾ ವರದಿ.**

ಟಿಪ್ಪಣಿ: ದಿನಾಂಕ: 26.05.2013ರಂದು ನಡೆದ ವಿಶ್ವವಿದ್ಯಾಲಯದ ಪ್ರಶಾಸನ ಸಮಿತಿ ಹದಿನಾಲ್ಕನೇ ಸಭೆಯಲ್ಲಿ ಮಂಡಿತವಾದ ವಿಷಯಗಳನ್ನು ಕುರಿತು ನಿರ್ಣಯಿಸಿದಂತೆ ಕ್ರಮಕೈಗೊಳ್ಳಲಾದ ಅನುಪಾಲನಾ ವರದಿ.

**ವಿಷಯ ಸಂಖ್ಯೆ 4**ಕ್ಕೆ ಸಂಬಂಧಿಸಿದಂತೆ ಅಧಿಸೂಚನೆಯನ್ನು ಹೊರಡಿಸಲಾಗಿದೆ. **ವಿಷಯ ಸಂಖ್ಯೆ 5**ಕ್ಕೆ ಸಂಬಂಧಿಸಿದಂತೆ ಸಂಜೆ ಕಾಲೇಜನ್ನು ಪ್ರಾರಂಭಿಸಲು ಕ್ರಮಕೈಗೊಳ್ಳಲಾಗುತ್ತಿದೆ. **ವಿಷಯ ಸಂಖ್ಯೆ 6**ಕ್ಕೆ ಸಂಬಂಧಿಸಿದಂತೆ ಯೋಜನಾ ಸಹಾಯಕ ಮತ್ತು ಗ್ರಂಥಾಲಯ ಸಹಾಯಕ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲಾಗಿದ್ದು, ಕರ್ತವ್ಯಕ್ಕೆ ಹಾಜರಾಗಿರುತ್ತಾರೆ. **ವಿಷಯ ಸಂಖ್ಯೆ 7**ಕ್ಕೆ ಕ್ರಮವಹಿಸಲು ಸೂಚಿಸಿದೆ. ಅಧ್ಯಕ್ಷರ ಅಪ್ಪಣೆಯ ಮೇರೆಗಿನ **ವಿಷಯ ಸಂಖ್ಯೆ 1**ಕ್ಕೆ ಸಂಬಂಧಿಸಿದಂತೆ ತಿದ್ದುಪಡಿ ಪರಿನಿಯಮವನ್ನು ಸರ್ಕಾರಕ್ಕೆ ಸಲ್ಲಿಸಲು ಕ್ರಮಕೈಗೊಳ್ಳಲಾಗಿದೆ. **ವಿಷಯ ಸಂಖ್ಯೆ 2**ಕ್ಕೆ ಸಂಬಂಧಿಸಿದಂತೆ ಕ್ರಮವಹಿಸಲಾಗುತ್ತಿದೆ.

ನಿರ್ಣಯ: **ಸಭೆಯು ಅನುಪಾಲನಾ ವಿವರಗಳನ್ನು ಪರಿಶೀಲಿಸಿ ಅನುಮೋದನೆಯನ್ನು ನೀಡಿತು.**

**ವಿಷಯ 2: 14.06.2013ರಂದು ನಡೆದ ಪ್ರಶಿಕ್ಷಣ ಪರಿಷತ್ತಿನ 8ನೇ ಸಭೆಯ ನಡಾವಳಿಯನ್ನು ಅನುಮೋದಿಸುವ ಬಗೆಗೆ.**

ಟಿಪ್ಪಣಿ: ಪ್ರಶಿಕ್ಷಣ ಪರಿಷತ್ತಿನ ಎಂಟನೇ ಸಭೆಯು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ದಿನಾಂಕ: 14.06.2013ರಂದು ನಡೆಯಿತು. ಈ ಸಭೆಯ ನಡಾವಳಿಯನ್ನು ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮಂಡಿಸಿದೆ.

ನಿರ್ಣಯ: **ಸಭೆಯು ಪ್ರಶಿಕ್ಷಣ ಪರಿಷತ್ತಿನ ಎಂಟನೇ ಸಭೆಯ ನಡಾವಳಿಯನ್ನು ಪರಿಶೀಲಿಸಿ ಅನುಮೋದಿಸಿತು.**

**ವಿಷಯ 3: ದೀಕ್ಷಾಂತ ಘಟಿಕೋತ್ಸವ ಸಮಾರಂಭದಲ್ಲಿ ಗೌರವ ಡಿ.ಲಿಟ್ ಪ್ರದಾನ ಮಾಡುವುದರ ಬಗೆಗೆ.**

ಟಿಪ್ಪಣಿ: ಮಾನ್ಯ ಕುಲಾಧಿಪತಿಗಳ ಅನುಮೋದನೆಯಂತೆ ಈ ಕೆಳಕಂಡ ನಾಲ್ವರು ವಿದ್ವಾಂಸರಿಗೆ ವಿಶ್ವವಿದ್ಯಾಲಯದ ಡಿ.ಲಿಟ್ ಗೌರವ ಉಪಾಧಿಯನ್ನು ನೀಡಲಾಗುತ್ತಿದೆ.

1. ಪಂಡಿತ್ ಭಾಲಚಂದ್ರಶಾಸ್ತ್ರೀ ನಾಗೇಶಶಾಸ್ತ್ರೀ ಉಪ್ಪಿನ ಬೆಟಗೇರಿ ಜೋಶಿ, ಧಾರವಾಡ ಜಿಲ್ಲೆ (ನವೀನನ್ಯಾಯ)
2. ವಿದ್ವಾನ್ ಕೆ.ಎಸ್. ವರದಾಚಾರ್ಯ, ಮೈಸೂರು ಜಿಲ್ಲೆ (ವಿಶಿಷ್ಟಾದ್ವೈತವೇದಾಂತ)
3. ವಿದ್ವಾನ್ ಕೆ. ನಾರಾಯಣಶಾಸ್ತ್ರಿ ಬುಚ್ಚನ್, ಹೊನ್ನಾವರ, ಉತ್ತರ ಕನ್ನಡ ಜಿಲ್ಲೆ (ವೇದ, ಮೀಮಾಂಸಾ ಶಾಸ್ತ್ರ)
4. ಡಾ. ಎಂ. ಶಿವಕುಮಾರಸ್ವಾಮಿ, ಬೆಂಗಳೂರು ಜಿಲ್ಲೆ (ಶಕ್ತಿವಿಶಿಷ್ಟಾದ್ವೈತವೇದಾಂತ)

ನಿರ್ಣಯ: **ಸಭೆಯು ಮೇಲ್ಕಂಡ ನಾಲ್ವರು ಹಿರಿಯ ವಿದ್ವಾಂಸರಿಗೆ ಘನತೆವೆತ್ತ ಕುಲಾಧಿಪತಿಗಳ ಅನುಮೋದನೆಯ ಮೇರೆಗೆ ಗೌರವ ಡಿ.ಲಿಟ್ ಪ್ರದಾನ ಮಾಡಲು ಸಂತಸ ವ್ಯಕ್ತಪಡಿಸಿತು.**

**ವಿಷಯ 4: 2011–12ನೇ ಸಾಲಿನಲ್ಲಿ ನಡೆದ ಸ್ನಾತಕ–ಸ್ನಾತಕೋತ್ತರ ಪರೀಕ್ಷೆಗಳಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಬಿ.ಎ. ವಿದ್ವನ್ಮಧ್ಯಮಾ ಹಾಗೂ ಎಂ.ಎ. ವಿದ್ವದುತ್ತಮಾ ಉಪಾಧಿಗಳನ್ನು ಪ್ರದಾನ ಮಾಡುವ ಬಗೆಗೆ.**

ಟಿಪ್ಪಣಿ: ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯವು 2011–12ನೇ ಸಾಲಿನಲ್ಲಿ ನಡೆಸಿದ ಸಂಸ್ಕೃತ/ವೇದ ಸ್ನಾತಕ–ಸ್ನಾತಕೋತ್ತರ ಪ್ರಸಿದ್ಧ ಪರೀಕ್ಷೆಗಳಲ್ಲಿ ಉತ್ತೀರ್ಣರಾದ **249 ವಿದ್ಯಾರ್ಥಿಗಳಿಗೆ ಬಿ.ಎ. ವಿದ್ವನ್ಮಧ್ಯಮಾ** ಹಾಗೂ **166 ವಿದ್ಯಾರ್ಥಿಗಳಿಗೆ ಎಂ.ಎ. ವಿದ್ವದುತ್ತಮಾ** ಉಪಾಧಿಯನ್ನು ದ್ವಿತೀಯ ದೀಕ್ಷಾಂತ ಘಟಿಕೋತ್ಸವ ಸಮಾರಂಭದಲ್ಲಿ ಪ್ರದಾನ ಮಾಡಲಾಗುತ್ತಿದೆ.

ನಿರ್ಣಯ: **ಸಭೆಯು 2011–12ನೇ ಸಾಲಿನಲ್ಲಿ ಬಿ.ಎ. ವಿದ್ವನ್ಮಧ್ಯಮಾ ಮತ್ತು ಎಂ.ಎ. ವಿದ್ವದುತ್ತಮಾ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಉಪಾಧಿಗಳನ್ನು ಪ್ರದಾನ ಮಾಡಲು ಅನುಮೋದನೆಯನ್ನು ನೀಡಿತು.**

**ವಿಷಯ 5: ಆಯಾ ಶಾಸ್ತ್ರಭಾಗಗಳಲ್ಲಿ ಅತಿಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಸರ್ವೋತ್ಕೃಷ್ಟಶ್ರೇಣಿ ಪ್ರಮಾಣಪತ್ರ ನೀಡುವ ಬಗೆಗೆ.**

ಟಿಪ್ಪಣಿ: 2011–12ನೇ ಸಾಲಿನಲ್ಲಿ ವಿವಿಧ ಶಾಸ್ತ್ರಗಳಲ್ಲಿ ವಿಶಿಷ್ಟ ಶ್ರೇಣಿ ಪಡೆದು ಉತ್ತೀರ್ಣರಾದ ಒಂಭತ್ತು (9) ವಿದ್ಯಾರ್ಥಿಗಳಿಗೆ ರೂ. 5000/– ನಗದು ಪುರಸ್ಕಾರ ಮತ್ತು ಸರ್ವೋತ್ಕೃಷ್ಟಶ್ರೇಣಿ ಪ್ರಮಾಣಪತ್ರವನ್ನು ನೀಡಲಾಗುತ್ತಿದೆ. ಹನ್ನೆರಡು ಮಂದಿ ವಿದ್ಯಾರ್ಥಿಗಳು ಮತ್ತು ಶಾಸ್ತ್ರಭಾಗಗಳ ವಿವರ ಕೆಳಗಿನಂತಿದೆ:

| | | | |
|---|---|---|---|
| 1. | ಗೌರಿ ಹೆಗಡೆ | ಅಲಂಕಾರ | ಎಸ್.ಎಂ.ಎಸ್.ಪಿ. ಸಂಸ್ಕೃತ ಕಾಲೇಜು, ಉಡುಪಿ |
| 2. | ನಾಗೇಂದ್ರ ಪವನ ಆರ್.ಎನ್. | ವ್ಯಾಕರಣ | ಶ್ರೀ ಚಾಮರಾಜೇಂದ್ರ ಸಂಸ್ಕೃತ ಕಾಲೇಜು, ಬೆಂಗಳೂರು |
| 3. | ಭೀಮಸೇನ ಗೋಪಾಲಾಚಾರ್ ಗುತ್ತಲ್ | ನವೀನನ್ಯಾಯ | ಪೂರ್ಣಪ್ರಜ್ಞ ವಿದ್ಯಾಪೀಠ ಸಂಸ್ಕೃತ ಕಾಲೇಜು, ಬೆಂಗಳೂರು |
| 4. | ಶ್ರೀ ಕೃಷ್ಣ ಭಟ್ | ಪೂರ್ವಮೀಮಾಂಸಾ | ಶ್ರೀಮನ್ಮಹಾರಾಜ ಸಂಸ್ಕೃತ ಕಾಲೇಜು, ಮೈಸೂರು |
| 5. | ಬಾಲಚಂದ್ರ ಡಿ. | ದ್ವೈತವೇದಾಂತ | ಪೂರ್ಣಪ್ರಜ್ಞ ವಿದ್ಯಾಪೀಠ ಸಂಸ್ಕೃತ ಕಾಲೇಜು, ಬೆಂಗಳೂರು |
| 6. | ನವೀನ್ ಭಟ್ ಎಸ್. | ಅದ್ವೈತವೇದಾಂತ | ಶ್ರೀ ಚಾಮರಾಜೇಂದ್ರ ಸಂಸ್ಕೃತ ಕಾಲೇಜು, ಬೆಂಗಳೂರು |
| 7. | ವಿಜಯಾನಂದ ಅಡಿಗ ಬಿ. | ಜ್ಯೋತಿಷ್ಯ | ಎಸ್.ಎಂ.ಎಸ್.ಪಿ. ಸಂಸ್ಕೃತ ಕಾಲೇಜು, ಉಡುಪಿ |
| 8. | ಮಹೇಶ ಜಿ. ಭಟ್ | ಕೃಷ್ಣಯಜುರ್ವೇದ | ಶ್ರೀ ರಾಜರಾಜೇಶ್ವರಿ ಸಂಸ್ಕೃತ ಕಾಲೇಜು, ಸೋಂದಾ |
| 9. | ರಘುರಾಮ ಎಂ.ವಿ. | ಸಾಮವೇದ | ಶ್ರೀ ಚಾಮರಾಜೇಂದ್ರ ಸಂಸ್ಕೃತ ಕಾಲೇಜು, ಬೆಂಗಳೂರು |

ನಿರ್ಣಯ: **ಸಭೆಯು 2011–12ನೇ ಸಾಲಿನಲ್ಲಿ ವಿವಿಧ ಶಾಸ್ತ್ರಗಳಲ್ಲಿ ವಿಶಿಷ್ಟ ಶ್ರೇಣಿ ಪಡೆದು ಉತ್ತೀರ್ಣರಾದ ಒಂಭತ್ತು ವಿದ್ಯಾರ್ಥಿಗಳಿಗೆ ರೂ. 5000/– ನಗದು ಪುರಸ್ಕಾರ ಮತ್ತು ಸರ್ವೋತ್ಕೃಷ್ಟಶ್ರೇಣಿ ಪ್ರಮಾಣಪತ್ರ ನೀಡಲು ಅನುಮೋದನೆಯನ್ನು ನೀಡಿತು.**

**ವಿಷಯ 6: ಯುಜಿಸಿ ವೇತನಶ್ರೇಣಿಯ ಪ್ರಾಧ್ಯಾಪಕರ ನೇಮಕಾತಿಯನ್ನು ಅನುಮೋದಿಸುವ ಬಗೆಗೆ.**

ಟಿಪ್ಪಣಿ: ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯವು ಸೃಜಿಸಿರುವ **ಬೋಧಕ ಹುದ್ದೆ**ಗಳ ಪೈಕಿ 2012–13ನೇ ಸಾಲಿನಲ್ಲಿ ಮೊದಲ ಹಂತವಾಗಿ ಯುಜಿಸಿ ವೇತನಶ್ರೇಣಿಯ 03 ಪ್ರಾಧ್ಯಾಪಕ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ದಿನಾಂಕ 01.01.2013ರಂದು ಅಧಿಸೂಚನೆ ಹೊರಡಿಸಲಾಗಿತ್ತು. ಪ್ರಾಧ್ಯಾಪಕ ಹುದ್ದೆಗೆ ಸಲ್ಲಿಸಿದ ಅರ್ಜಿಗಳ ಪರಿಶೀಲನ ಕಾರ್ಯ ಮುಕ್ತಾಯಗೊಂಡಿದ್ದು, ಅರ್ಹ ಅಭ್ಯರ್ಥಿಗಳಿಗೆ ದಿನಾಂಕ 13.06.2013ರಂದು ಸಂದರ್ಶನವನ್ನು ನಡೆಸಲಾಯಿತು. ಈ ಸಂದರ್ಶನ ಸಮಿತಿಯ ನಿರ್ಣಯವನ್ನು ಅನುಮೋದನೆಗಾಗಿ ಸಭೆಯ ಮುಂದೆ ಮಂಡಿಸಿದೆ.

ನಿರ್ಣಯ: **ಯುಜಿಸಿ ವೇತನಶ್ರೇಣಿಯ ಪ್ರಾಧ್ಯಾಪಕ ಹುದ್ದೆಗಳಿಗೆ ದಿನಾಂಕ: 13, ಜೂನ್ 2013ರಂದು ನಡೆದ 'ಆಯ್ಕೆ ಸಮಿತಿ' ಸಭೆಯ ಶಿಫಾರಸ್ಸುಗಳನ್ನು ಸಂಪೂರ್ಣವಾಗಿ ಸಭೆಯು ಪರಿಶೀಲಿಸಿತು. ಈ ಸಂಬಂಧವಾಗಿ ಮಾನ್ಯ ಕುಲಪತಿಗಳು ಸಭೆಗೆ ವಿವರಗಳನ್ನು ಮಂಡಿಸಿದರು. ಭಾಷಾನಿಕಾಯ ಮತ್ತು ಶಾಸ್ತ್ರನಿಕಾಯ ಪ್ರಾಧ್ಯಾಪಕ ಹುದ್ದೆಗೆ ಬೇಕಾಗುವ ಸೇವಾ ಅನುಭವ, ಜ್ಯೇಷ್ಠತೆ ಮತ್ತು ಶೈಕ್ಷಣಿಕ ಅರ್ಹತೆಯನ್ನು ಕ್ರಮಾನುಸಾರವಾಗಿ ಪರಿಗಣಿಸಿ ಆಯ್ಕೆಗೊಂಡಿರುವ ಅಭ್ಯರ್ಥಿಗಳಿಗೆ ಸಭೆಯು ತನ್ನ ಅನುಮೋದನೆಯನ್ನು ನೀಡಿತು. ಸಭೆಯಲ್ಲಿ ಉಪಸ್ಥಿತರಿದ್ದ ಡಾ. ಸಂತಪ್ಪನವರ ಪಿ.ಬಿ. ಅವರು ಶಾಸ್ತ್ರನಿಕಾಯದ ಪ್ರಾಧ್ಯಾಪಕ ಹುದ್ದೆ ನೇಮಕಾತಿಗೆ ತಮ್ಮ ಒಪ್ಪಿಗೆ ಇಲ್ಲವೆಂದು ತಿಳಿಸಿದರು. ಆದರೆ, ಉಳಿದ ಎಲ್ಲ ಸದಸ್ಯರು ಭಾಷಾನಿಕಾಯ ಹಾಗೂ ಶಾಸ್ತ್ರನಿಕಾಯಗಳ ಪ್ರಾಧ್ಯಾಪಕ ಹುದ್ದೆಗೆ ಆಯ್ಕೆಗೊಂಡಿರುವ ಅಭ್ಯರ್ಥಿಗಳು ಆ ಹುದ್ದೆಗೆ ಬೇಕಾಗುವ ಸಾಮರ್ಥ್ಯವನ್ನು ಹೊಂದಿರುವ ವಿಷಯವನ್ನು ಪರಿಗಣಿಸಿ ನೇಮಕಾತಿಗೆ ಒಪ್ಪಿಗೆ ನೀಡಿದರು. ವೇದಾಂತ ನಿಕಾಯದ ಪ್ರಾಧ್ಯಾಪಕ ಹುದ್ದೆಗೆ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಅರ್ಜಿ ಸಲ್ಲಿಸದೇ ಇರುವುದರಿಂದ ಮತ್ತೊಮ್ಮೆ ಅಧಿಸೂಚನೆಯನ್ನು ಹೊರಡಿಸಿ ಹುದ್ದೆಯನ್ನು ಭರ್ತಿ ಮಾಡಿಕೊಳ್ಳಲು ಕ್ರಮಕೈಗೊಳ್ಳಬಹುದೆಂದು ಸಭೆ ಸೂಚಿಸಿತು. ನೇಮಕಾತಿ ಹೊಂದಿರುವವರು ನೇಮಕಾತಿ ಆದೇಶ ಹೊರಡಿಸಿದ ಒಂದು ವಾರದ ಒಳಗೆ ಕರ್ತವ್ಯಕ್ಕೆ ಹಾಜರಾಗಲು ಸಭೆಯು ಸೂಚಿಸಿತು.**

| ಕ್ರ.ಸಂ. | ನಿಕಾಯ | ಆಯ್ಕೆಗೊಂಡ ಅಭ್ಯರ್ಥಿಗಳು | ಮೀಸಲಾತಿ |
|---|---|---|---|
| **01**. | ಭಾಷಾ ನಿಕಾಯ | **ಡಾ. ವಿ. ಗಿರೀಶ್ ಚಂದ್ರ**<br>ಸಹಾಯಕ ಪ್ರಾಧ್ಯಾಪಕರು, ಸಂಸ್ಕೃತ ವಿಭಾಗ<br>ಕರ್ನಾಟಕ ವಿಶ್ವವಿದ್ಯಾಲಯ<br>ಪಾವಟೆನಗರ, ಧಾರವಾಡ–580003. | ಪರಿಶಿಷ್ಟ ಜಾತಿ |
| **02**. | ಶಾಸ್ತ್ರ ನಿಕಾಯ | **ಡಾ. ಶ್ರೀನಿವಾಸ ವರಖೇಡಿ**<br>ನಂ. 24/10, 'ವೈಜಯಂತ'<br>ದೇವಸ್ಥಾನದ ರಸ್ತೆ, ಐ.ಟಿ.ಐ. ಬಡಾವಣೆ<br>ಬನಶಂಕರಿ 3ನೇ ಹಂತ, ಬೆಂಗಳೂರು – 560085. | ಸಾಮಾನ್ಯ |

**ಪ್ರೊ. ವೈ.ಎಸ್. ಸಿದ್ದೇಗೌಡ**
ಸದಸ್ಯ ಕಾರ್ಯದರ್ಶಿ

**ಪ್ರೊ. ಮಲ್ಲೇಪುರಂ ಜಿ. ವೆಂಕಟೇಶ**
ಅಧ್ಯಕ್ಷರು